**All India Radio: Bangalore**
**National Bulletin In Kannada**
**08.04.2026  7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**08.04.2026  7.35 am**

**<>><><*><><<>**

ಮುಖ್ಯಾಂಶಗಳು

**೧.  ಎರಡು ವಾರಗಳ ಕದನ ವಿರಾಮಕ್ಕೆ ಅಮೆರಿಕ, ಇರಾನ್ ಒಪ್ಪಿಗೆ**

**೨.  ಅಸ್ಸಾಂ, ಕೇರಳ, ಪುದುಚೆರಿ ವಿಧಾನಸಭಾ ಚುನಾವಣೆ: ನಾಳೆ ಮತದಾನ**

**೩.  ವಿದೇಶಾಂಗ ಕಾರ್ಯದರ್ಶಿ ವಿಕ್ರಂ ಮಿಸ್ರಿ ಇಂದಿನಿಂದ ಅಮೆರಿಕಕ್ಕೆ ಮೂರು ದಿನಗಳ ಭೇಟಿ**

**೪.  ಐಪಿಎಲ್ ಟಿ-೨೦ ಕ್ರಿಕೆಟ್: ಮುಂಬೈ ಇಂಡಿಯನ್ಸ್ ವಿರುದ್ಧ ರಾಜಸ್ಥಾನ ರಾಯಲ್ಸ್ ತಂಡಕ್ಕೆ ಭರ್ಜರಿ ಜಯ**

**<>><><*><><<>**

ಎರಡು ವಾರಗಳ ಕದನ ವಿರಾಮಕ್ಕೆ ಅಮೆರಿಕ ಮತ್ತು ಇರಾನ್ ಒಪ್ಪಿಗೆ ನೀಡಿವೆ. ಹಾರ್ಮುಜ್ ಜಲಸಂಧಿಯ ಮೂಲಕ ಹಡಗುಗಳ ಸಂಚಾರಕ್ಕೆ ಅವಕಾಶ ನೀಡಿದರೆ, ಅಮೆರಿಕ ಮತ್ತು ಇರಾನ್ ನಡುವೆ ಎರಡು ವಾರಗಳ ಕದನ ವಿರಾಮಕ್ಕೆ ಒಪ್ಪಿಗೆ ನೀಡಲಾಗುವುದು ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.  ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಟ್ರಂಪ್, ಎರಡೂ ಕಡೆಯವರು, ದ್ವಿಪಕ್ಷೀಯ ಕದನ ವಿರಾಮಕ್ಕೆ ಒಪ್ಪಿಕೊಳ್ಳಬೇಕು ಎಂದು ಹೇಳಿದ್ದು, ಅಮೆರಿಕ ಈಗಾಗಲೇ ತನ್ನ ಮಿಲಿಟರಿ ಗುರಿಗಳನ್ನು ಸಾಧಿಸಿದೆ. ಸಂಘರ್ಷ ಪರಿಹಾರವಾಗುವ ಹಂತಕ್ಕೆ ಹತ್ತಿರವಾಗಬಹುದು ಎಂದು ಹೇಳಿದ್ದಾರೆ. ಇದಕ್ಕೂ ಮೊದಲು, ಹಾರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯುವುದು ಸೇರಿದಂತೆ ಇರಾನ್ ತನ್ನ ಬೇಡಿಕೆಗಳಿಗೆ ಒಪ್ಪದಿದ್ದರೆ ವಿದ್ಯುತ್ ಸ್ಥಾವರಗಳು ಮತ್ತು ಸೇತುವೆಗಳಂತಹ ಪ್ರಮುಖ ಮೂಲಸೌಕರ್ಯವನ್ನು ಗುರಿಯಾಗಿಸಿ ದಾಳಿ ನಡೆಸಬಹುದು ಎಂದು ಇರಾನ್‌ಗೆ ಟ್ರಂಪ್ ಎಚ್ಚರಿಕೆ ನೀಡಿದರು. ಈ ನಿರ್ಧಾರಕ್ಕಾಗಿ ಅವರು ಇಂದು ಬೆಳಗ್ಗೆ ೫:೩೦ ಕ್ಕೆ ಗಡುವು ನಿಗದಿಪಡಿಸಿದ್ದರು. ಮತ್ತೊಂದೆಡೆ, ಇರಾನ್ ವಿರುದ್ಧದ ದಾಳಿಗಳನ್ನು ನಿಲ್ಲಿಸಿದರೆ, ಇರಾನ್ ಕದನ ವಿರಾಮಕ್ಕೆ ಒಪ್ಪುತ್ತದೆ ಎಂದು ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ ಘೋಷಿಸಿದರು. ಎರಡು ವಾರಗಳ ಅವಧಿಗೆ, ಹಾರ್ಮುಜ್ ಜಲಸಂಧಿಯ ಮೂಲಕ ಸುರಕ್ಷಿತ ಮಾರ್ಗ ಸಾಧ್ಯ ಎಂದು ಅವರು ಘೋಷಿಸಿದರು. ಇರಾನ್‌ನ ಸಶಸ್ತ್ರ ಪಡೆಗಳೊಂದಿಗೆ ಸಮನ್ವಯದ

ಮೂಲಕ ಮತ್ತು ತಾಂತ್ರಿಕ ಮಿತಿಗಳನ್ನು ಸರಿಯಾಗಿ ಪರಿಗಣಿಸಿ ಇದು ನಡೆಯುತ್ತದೆ ಎಂದು ಅವರು ಹೇಳಿದರು.

**<>><><*><><<>**

ಜಾಗತಿಕ ತೈಲದ ಐದನೇ ಒಂದು ಭಾಗ ಹಾದುಹೋಗುವ ಪ್ರಮುಖ ಕಡಲತೀರದ ಹಾರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯುವ ಕುರಿತು ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ನಿರ್ಣಯವನ್ನು ರಷ್ಯಾ ಮತ್ತು ಚೀನಾ ವೀಟೋ ಅಧಿಕಾರ ಬಳಸಿ, ತಿರಸ್ಕರಿಸಿವೆ. ೧೫ ರಾಷ್ಟ್ರಗಳ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯು ಬಹ್ರೇನ್ ಪ್ರಸ್ತಾಪಿಸಿದ ನಿರ್ಣಯದ ಮೇಲೆ ಮತ ಚಲಾಯಿಸಿತು. ನಿರ್ಣಯದ ಪರವಾಗಿ ೧೧ ಮತಗಳು, ವಿರುದ್ಧವಾಗಿ ಎರಡು ಮತ ಮತ್ತು ಎರಡು ದೇಶಗಳು ಗೈರುಹಾಜರಾಯಿತು. ವೀಟೋ-ಚಲಾಯಿಸುವ ಖಾಯಂ ಸದಸ್ಯರಾದ ರಷ್ಯಾ ಮತ್ತು ಚೀನಾ ನಿರ್ಣಯದ ವಿರುದ್ಧ ಮತ ಚಲಾಯಿಸಿದ ಕಾರಣ ನಿರ್ಣಯವನ್ನು ಅಂಗೀಕರಿಸಲಾಗಲಿಲ್ಲ.

**<>><><*><><<>**

ಅಸ್ಸಾಂ, ಕೇರಳ ಮತ್ತು ಕೇಂದ್ರಾಡಳಿತ ಪ್ರದೇಶವಾದ ಪುದುಚೆರಿಯ ವಿಧಾನಸಭಾ ಚುನಾವಣೆಯ ಬಹಿರಂಗ ಪ್ರಚಾರಕ್ಕೆ ತೆರೆಬಿದ್ದಿದ್ದು, ನಾಳೆ ಮತದಾನ ನಡೆಯಲಿದೆ.ವಿವಿಧ ರಾಜಕೀಯ ಪಕ್ಷಗಳ ನಾಯಕರು ಮತದಾರರನ್ನು ಸೆಳೆಯಲು ನಿನ್ನೆ ಕೊನೆಯ ಕ್ಷಣದ ಬಿರುಸಿನ ಪ್ರಚಾರ ನಡೆಸಿದರು. ಇಂದು ಮನೆ-ಮನೆ ಪ್ರಚಾರದಲ್ಲಿ ನಾಯಕರು, ಅಭ್ಯರ್ಥಿಗಳು ತೊಡಗಲಿದ್ದಾರೆ. ಅಸ್ಸಾಂನ ೧೨೬, ಕೇರಳದ ೧೪೦ ಮತ್ತು ಪುದುಚೇರಿಯ ೩೦ ಸ್ಥಾನಗಳಿಗೆ ನಾಳೆ ಒಂದೇ ಹಂತದಲ್ಲಿ ಮತದಾನ ನಡೆಯಲಿದೆ. ತಮಿಳುನಾಡಿನ ಎಲ್ಲಾ ೨೩೪ ಸ್ಥಾನಗಳಿಗೆ ಮತ್ತು ಪಶ್ಚಿಮ ಬಂಗಾಳದ ಮೊದಲ ಹಂತದ ೧೫೨ ಕ್ಷೇತ್ರಗಳಿಗೆ ಈ ತಿಂಗಳ ೨೩ ರಂದು ಮತದಾನ ನಡೆಯಲಿದೆ. ಎಲ್ಲಾ ರಾಜ್ಯಗಳ ಚುನಾವಣಾ ಫಲಿತಾಂಶ ಮೇ ೪ ರಂದು ಪ್ರಕಟವಾಗಲಿದೆ.

**<>><><*><><<>**

ಮುಂಬರುವ ವಿಧಾನಸಭಾ ಚುನಾವಣೆಗೆ ಸಂಬಂಧಿಸಿದಂತೆ ಮತಗಟ್ಟೆ ಪ್ರತಿನಿಧಿಗಳಿಗೆ ಆಸನಗಳ ವ್ಯವಸ್ಥೆ ಕುರಿತು ಯಾವುದೇ ಹೊಸ ಮಾರ್ಗಸೂಚಿ ಜಾರಿಗೆ ತಂದಿಲ್ಲ ಎಂದು ಚುನಾವಣಾ ಆಯೋಗ ಸ್ಪಷ್ಟಪಡಿಸಿದೆ. ಮತದಾನದ ದಿನ ವಿವಿಧ ರಾಜಕೀಯ ಪಕ್ಷಗಳ ಮತಗಟ್ಟೆ ಪ್ರತಿನಿಧಿಗಳನ್ನು ಮತಗಟ್ಟೆಗಳ ಒಳಗೆ ಕುಳಿತುಕೊಳ್ಳಲು ಅನುಮತಿಸಲಾಗುವುದಿಲ್ಲ ಎಂದು ಕೆಲವು ಮಾಧ್ಯಮಗಳ ಮೂಲಕ ಹರಡಲಾಗುತ್ತಿರುವ ಸಂದೇಶಗಳನ್ನು ಚುನಾವಣಾ ಆಯೋಗ ತಳ್ಳಿಹಾಕಿದೆ. ಮತಗಟ್ಟೆ ಪ್ರತಿನಿಧಿಗಳಿಗೆ ಸಂಬಂಧಿಸಿದ ಮಾರ್ಗಸೂಚಿಗಳಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದು ಆಯೋಗ ತಿಳಿಸಿದೆ.

**<>><><*><><<>**

ಭಾರತೀಯ ರಿಸರ್ವ್ ಬ್ಯಾಂಕ್ ಇಂದು ತನ್ನ ದ್ವೈಮಾಸಿಕ ಹಣಕಾಸು ನೀತಿಯನ್ನು ಪ್ರಕಟಿಸಲಿದೆ. ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಇಂದು ಬೆಳಗ್ಗೆ ೨೦೨೬-೨೭ರ ಹಣಕಾಸು ವರ್ಷದ ಮೊದಲ ಸಭೆಯಲ್ಲಿ ಹಣಕಾಸು ನೀತಿ ಸಮಿತಿ ತೆಗೆದುಕೊಂಡ ನಿರ್ಧಾರಗಳನ್ನು ಪ್ರಕಟಿಸಲಿದ್ದಾರೆ. ಆರ್‌ಬಿಐ ಗವರ್ನರ್ ನೇತೃತ್ವದಲ್ಲಿ, ಆರು ಸದಸ್ಯರ ಹಣಕಾಸು ನೀತಿ ಸಮಿತಿ, ಕಳೆದ ಸೋಮವಾರದಿಂದ ಬಡ್ಡಿ ದರಗಳು, ಹಣದುಬ್ಬರ ಮುನ್ನೋಟ ಮತ್ತು ಬೆಳವಣಿಗೆಯ ಮುನ್ಸೂಚನೆಗಳಂತಹ ಪ್ರಮುಖ ಅಂಶಗಳ ಕುರಿತು ಚರ್ಚಿಸುತ್ತಿದೆ.

**<>><><*><><<>**

ವಿದೇಶಾಂಗ ಕಾರ್ಯದರ್ಶಿ ವಿಕ್ರಂ ಮಿಸ್ರಿ ಇಂದಿನಿಂದ ಅಮೆರಿಕಕ್ಕೆ ಮೂರು ದಿನಗಳ ಕಾಲ ಪ್ರವಾಸ ಕೈಗೊಳ್ಳಲಿದ್ದಾರೆ. ತಮ್ಮ ಭೇಟಿಯ ವೇಳೆ ಅವರು, ಅಮೆರಿಕದ ಹಿರಿಯ ಆಡಳಿತಾಧಿಕಾರಿಗಳೊಂದಿಗೆ ವ್ಯಾಪಾರ, ರಕ್ಷಣೆ, ವಿಜ್ಞಾನ, ತಂತ್ರಜ್ಞಾನ ಹಾಗೂ ಪರಸ್ಪರ ಹಿತಾಸಕ್ತಿಯ ಜಾಗತಿಕ ಹಾಗೂ ಪ್ರಾದೇಶಿಕ ಬೆಳವಣಿಗೆಗಳು ಸೇರಿದಂತೆ ವಿವಿಧ ವಿಷಯಗಳ ಕುರಿತು ಸಮಾಲೋಚನೆ ನಡೆಸಲಿದ್ದಾರೆ. ಈ ಭೇಟಿ ಭಾರತ ಮತ್ತು ಅಮೆರಿಕ ನಡುವಿನ ದ್ವಿಪಕ್ಷೀಯ ಸಂಬಂಧ ಮತ್ತು ಬೆಳೆಯುತ್ತಿರುವ ಸಹಕಾರದ ಪರಿಶೀಲನೆ ನಡೆಸಲು ಸಹಕಾರಿಯಾಗಲಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

**<>><><*><><<>**

ಭಾರತಕ್ಕೆ ಮೂರು ದಿನಗಳ ಭೇಟಿಗಾಗಿ ಆಗಮಿಸಿರುವ ಬಾಂಗ್ಲಾದೇಶ ವಿದೇಶಾಂಗ ಸಚಿವ ಖಲೀಲುರ್ ರಹ್ಮಾನ್ ನಿನ್ನೆ ಸಂಜೆ ನವದೆಹಲಿಗೆ ಆಗಮಿಸಿದ್ದಾರೆ. ಭಾರತ ಮತ್ತು ಬಾಂಗ್ಲಾದೇಶ, ಆತ್ಮೀಯ ಹಾಗೂ ಐತಿಹಾಸಿಕ ಬಾಂಧವ್ಯವನ್ನು ಹಂಚಿಕೊಂಡಿವೆ. ರಹ್ಮಾನ್ ಅವರ ಭೇಟಿ ಭಾರತ-ಬಾಂಗ್ಲಾದೇಶ ಸಹಭಾಗಿತ್ವವನ್ನು ಇನ್ನಷ್ಟು ಬಲಪಡಿಸುತ್ತದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಹೇಳಿದ್ದಾರೆ. ಭೇಟಿಯ ಸಮಯದಲ್ಲಿ ಖಲೀಲುರ್ ರಹ್ಮಾನ್ ಅವರು ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಹಾಗೂ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಅವರನ್ನು ಭೇಟಿಯಾಗಲಿದ್ದಾರೆ. ಫೆಬ್ರವರಿಯಲ್ಲಿ ಬಿಎನ್‌ಪಿ ನೇತೃತ್ವದ ಸರ್ಕಾರ ಬಾಂಗ್ಲಾದೇಶದಲ್ಲಿ ಅಧಿಕಾರಕ್ಕೆ ಬಂದ ನಂತರ, ಬಾಂಗ್ಲಾದೇಶದ ಸಚಿವರೊಬ್ಬರು ನವದೆಹಲಿಗೆ ಭೇಟಿ ನೀಡುತ್ತಿರುವುದು ಇದೇ ಮೊದಲ ಬಾರಿಯಾಗಿದೆ.

**<>><><*><><<>**

ದೇಶಾದ್ಯಂತ ಪೆಟ್ರೋಲ್, ಡೀಸೆಲ್, ಎಲ್‌ಪಿಜಿ ಮತ್ತು ಪಿಎನ್‌ಜಿ ಪೂರೈಕೆ ಸಾಮಾನ್ಯವಾಗಿದೆ ಎಂದು ಕೇಂದ್ರ ಸರ್ಕಾರ ಹೇಳಿದೆ. ನವದೆಹಲಿಯಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ

ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ, ದೇಶಾದ್ಯಂತ ಎಲ್‌ಪಿಜಿ ವಿತರಕರಲ್ಲಿ ಸಾಕಷ್ಟು ದಾಸ್ತಾನು ಲಭ್ಯವಿದೆ. ಎಲ್ಲಾ ಪೆಟ್ರೋಲ್ ಬಂಕ್‌ಗಳಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ವಿತರಣೆಯಲ್ಲಿ ಕೊರತೆಯಾಗಿರುವುದರ ಬಗ್ಗೆ ಯಾವುದೇ ವರದಿಯಾಗಿಲ್ಲ ಎಂದು ತಿಳಿಸಿದರು.  ಎಲ್‌ಪಿಜಿ ಸಿಲಿಂಡರ್‌ಗಳ ವಿತರಣೆಯು ಸುಗಮವಾಗಿ ಮುಂದುವರಿದಿದೆ. ಆನ್‌ಲೈನ್ ಎಲ್‌ಪಿಜಿ ಬುಕ್ಕಿಂಗ್‌ಗಳು ಸುಮಾರು ಶೇಕಡ ೯೭ಕ್ಕೆ ಏರಿಕೆಯಾಗಿದೆ. ಐದು ಕೆಜಿ ಎಲ್‌ಪಿಜಿ ಸಿಲಿಂಡರ್‌ಗಳ ವಿತರಣೆಯನ್ನು ದ್ವಿಗುಣಗೊಳಿಸುವಂತೆ ಹೊಸದಾಗಿ ಆದೇಶ ಹೊರಡಿಸಲಾಗಿದೆ ಎಂದು ಸುಜಾತಾ ಶರ್ಮಾ ಮಾಹಿತಿ ನೀಡಿದರು.

<>><><*><><<>

ಗುವಾಹಟಿಯ ಬರ್ಸಾಪುರ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ವಿರುದ್ಧ ರಾಜಸ್ಥಾನ ರಾಯಲ್ಸ್ ತಂಡ ೨೭ ರನ್‌ಗಳಿಂದ ಭರ್ಜರಿ ಜಯ ದಾಖಲಿಸಿದೆ. ಮಳೆಯ ಕಾರಣ ಪಂದ್ಯವನ್ನು ೧೧ ಓವರ್‌ಗಳಿಗೆ ಸೀಮಿತಗೊಳಿಸಲಾಯಿತು. ಮೊದಲು ಬ್ಯಾಟಿಂಗ್ ಮಾಡಿದ ರಾಜಸ್ಥಾನ ರಾಯಲ್ಸ್ ೧೧ ಓವರ್‌ಗಳಿಗೆ ೩ ವಿಕೆಟ್ ನಷ್ಟಕ್ಕೆ ೧೫೦ ರನ್ ಗಳಿಸಿತು. ಯಶಸ್ವಿ ಜೈಸ್ವಾಲ್ ೩೨ ಎಸೆತಗಳಿಗೆ ೭೭ ರನ್ ಗಳಿಸಿದರು. ವೈಭವ್ ಸೂರ್ಯವಂಶಿ ೧೪ ಎಸೆತಗಳಿಗೆ ೩೯ ರನ್ ಗಳಿಸಿದರು. ಗೆಲುವಿನ ಗುರಿ ಬೆನ್ನತ್ತಿದ ಮುಂಬೈ ಇಂಡಿಯನ್ಸ್, ೧೧ ಓವರ್‌ಗಳಿಗೆ ೯ ವಿಕೆಟ್ ನಷ್ಟಕ್ಕೆ ೧೨೩ ರನ್ ಗಳಿಸಿ ಶರಣಾಯಿತು. ರಾಜಸ್ಥಾನ ರಾಯಲ್ಸ್ ಪರ ಸಂದೀಪ್, ಬರ್ಗರ್, ರವಿ ಬಿಷ್ಣಾಯ್ ತಲಾ ೨ ವಿಕೆಟ್ ಕಬಳಿಸಿದರು. ಯಶಸ್ವಿ ಜೈಸ್ವಾಲ್ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

<>><><*><><<>

ಇಂಡೋ-ಟಿಬೆಟಿಯನ್ ಬಾರ್ಡರ್ ಪೋಲಿಸ್-ಐಟಿಬಿಪಿ ಆಯೋಜಿಸಿರುವ ೨೫ನೇ ಅಖಿಲ ಭಾರತ ಜಲ ಕ್ರೀಡಾ ಕ್ಲಸ್ಟರ್ ಇಂದು ಉತ್ತರಾಖಂಡದ ತೆಹ್ರಿಯ ವಸಾಯಿಯಲ್ಲಿ ಪ್ರಾರಂಭವಾಗಲಿದೆ. ೫ ದಿನಗಳ ಈ ಕ್ರೀಡಾಕೂಟವು ಈ ತಿಂಗಳ ೧೨ ರವರೆಗೆ ನಡೆಯಲಿದೆ. ದೇಶಾದ್ಯಂತ ೧೯ ತಂಡಗಳು ೫೨ ಕ್ರೀಡಾಕೂಟಗಳಲ್ಲಿ ಭಾಗವಹಿಸಲಿವೆ ಎಂದು ಐಟಿಬಿಪಿ ಇನ್ಸ್‌ಪೆಕ್ಟರ್ ಜನರಲ್ ಮನು ಮಹಾರಾಜ್ ಮಾಹಿತಿ ನೀಡಿದ್ದಾರೆ.

<>><><*><><<>

ಕೇಂದ್ರ ಸಂಸ್ಕೃತಿ ಸಚಿವಾಲಯವು ವಂದೇ ಮಾತರಂ ಫ್ರೇಮ್ಸ್ ರಾಷ್ಟ್ರೀಯ ಚಲನಚಿತ್ರ ನಿರ್ಮಾಣ ಸ್ಪರ್ಧೆಗೆ ದೇಶದ ಚಲನಚಿತ್ರ ನಿರ್ಮಾಪಕರು ಮತ್ತು ಸೃಜನಶೀಲ ಉತ್ಸಾಹಿಗಳನ್ನು ಆಹ್ವಾನಿಸಿದೆ. ತಮ್ಮ ವಿಶಿಷ್ಟ ಕಥೆ ಹೇಳುವ ಮೂಲಕ ವಂದೇ ಮಾತರಂನ ಚೈತನ್ಯವನ್ನು ಪಸರಿಸಲು, ಈ ಸ್ಪರ್ಧೆಯು ಭಾಗವಹಿಸುವವರು ತಮ್ಮ ಸೃಜನಶೀಲತೆ, ನಾವೀನ್ಯತೆ ಮತ್ತು ಸಿನಿಮೀಯ

ಕೌಶಲ್ಯಗಳನ್ನು ಪ್ರದರ್ಶಿಸಲು ಮತ್ತು ರಾಷ್ಟ್ರದ ಬಗ್ಗೆ ಹೆಮ್ಮೆ ವ್ಯಕ್ತಪಡಿಸಲು ಒಂದು ವೇದಿಕೆಯನ್ನು ಒದಗಿಸುತ್ತದೆ. ಕಲಾತ್ಮಕ ಅಭಿವ್ಯಕ್ತಿಯನ್ನು ಉತ್ತೇಜಿಸುವುದು ಮತ್ತು ವಂದೇ ಮಾತರಂ ಹಾಡಿನ ಸಾಂಸ್ಕೃತಿಕ ಮತ್ತು ದೇಶಭಕ್ತಿಯ ಮಹತ್ವದೊಂದಿಗೆ ಆಳವಾದ ಸಂಪರ್ಕವನ್ನು ಪ್ರೇರೇಪಿಸುವುದು ಈ ಉಪಕ್ರಮದ ಗುರಿಯಾಗಿದೆ. ಸ್ಪರ್ಧೆಯು ವ್ಯಕ್ತಿಗಳು ಮತ್ತು ತಂಡಗಳಿಗೆ ಮುಕ್ತವಾಗಿದೆ. ಭಾಗವಹಿಸುವವರು ತಮ್ಮ ಚಲನಚಿತ್ರ ನಮೂದುಗಳನ್ನು vandemataram150.in ಮೂಲಕ ಸಲ್ಲಿಸಬಹುದು.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>**